For more job news : www.kpscvaani.com

ESTD : No.JRB/Cell.II/69/Regn-4876/77-78 :080-26601442
Date : 09-12-1977

ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ
THE BANGALORE CITY DIST. CO-OPERATIVE UNION LTD.,

'ಸಹಕಾರ ಭವನ' ನಂ. 1/3, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು-560 018
e-mail: bcdcu1977@gmail.com

ಸಂಖ್ಯೆ:ಬೆಂನಜಿಸ./03/2020-21 ದಿನಾಂಕ: 03-06-2020

ನೇಮಕಾತಿ ಪ್ರಕಟಣೆ

ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ. ಇಲ್ಲಿ ಖಾಲಿ ಇರುವ ಈ ಕೆಳಕಂಡ 02 ಹುದ್ದೆಗೆ ನೇರ ನೇಮಕಾತಿ ಮೂಲಕ ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿಯನ್ನು ಕಛೇರಿ ಸಮಯದಲ್ಲಿ ಖುದ್ದಾಗಿ ಹಾಜರಾಗಿ ಅರ್ಜಿ ಪಡೆದು ಸಲ್ಲಿಸಬಹುದಾಗಿದೆ. ಒಂದು ವೇಳೆ ಅಂಚೆ ಮೂಲಕ ಅರ್ಜಿಯನ್ನು ಪಡೆಯಲು ಇಚ್ಛಿಸಿದ್ದಲ್ಲಿ ಅಂಚೆ ವೆಚ್ಚ ರೂ.100/- ಪಾವತಿಸಿ ಪಡೆಯತಕ್ಕದ್ದು. ಹಾಗೂ ಸಾಮಾನ್ಯ ಅಭ್ಯರ್ಥಿಯಾದಲ್ಲಿ ಅರ್ಜಿ ಶುಲ್ಕ ರೂ.2,000/- ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-I, ಅಭ್ಯರ್ಥಿಗಳಾದಲ್ಲಿ ಅರ್ಜಿ ಶುಲ್ಕ ರೂ.1,000/-ಗಳನ್ನು ಡಿ.ಡಿ. ಮೂಲಕ "ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು" ಇದರ ಹೆಸರಿನಲ್ಲಿ ಪಡೆದು ಖುದ್ದಾಗಿ ಅರ್ಜಿಯ ಜೊತೆ ಸಲ್ಲಿಸತಕ್ಕದ್ದು.

ಹುದ್ದೆಗಳ ವಿವರ

ಕ್ರ ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು	ಒಟ್ಟು ಹುದ್ದೆಗಳು
		ಸಾಮಾನ್ಯ	
01	ಬೆರಳಚ್ಚುಗಾರ, ವೇತನ ಶ್ರೇಣಿ: ರೂ.21400-42000	01	01
02	ಆಟೆಂಡರ್/ಜವಾನ, ವೇತನ ಶ್ರೇಣಿ: ರೂ.17000-28950	01	01

ಶೈಕ್ಷಣಿಕ ವಿದ್ಯಾರ್ಹತೆ.

- **ಬೆರಳಚ್ಚುಗಾರ :-** ದ್ವಿತೀಯ ಪಿ.ಯು.ಸಿ ಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಉತ್ತೀರ್ಣರಾಗಿರಬೇಕು. ಸೀನಿಯರ್ ಟೈಪಿಂಗ್ ಕನ್ನಡ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಸಹಕಾರ ವಿಷಯದಲ್ಲಿ ಡಿಪ್ಲೊಮಾ ಪಡೆದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.
- **ಆಟೆಂಡರ್ / ಜವಾನ :-** ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

1) ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ: 05-06-2020

2) ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 20-06-2020 ಸಮಯ:-ಸಂಜೆ 5:00 ಘಂಟೆಯೊಳಗೆ.

ಸೂಚನೆ : ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಯಾವುದೇ ಕಾರಣವನ್ನು ನೀಡದೆ ರದ್ದುಗೊಳಿಸುವ ಹಕ್ಕನ್ನು ಒಕ್ಕೂಟವು ಹೊಂದಿರುತ್ತದೆ. ಹಾಗಾದಲ್ಲಿ ಮಾತ್ರ ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಸಮಸ್ಯೆ ಎದುರಾದಲ್ಲಿ ದೆಂಗಳೂರು ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಕಛೇರಿಯನ್ನು ಸಂಪರ್ಕಿಸಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿ ಸಲ್ಲಿಸಬಹುದು.

ಸಹಿ/- ಸದಸ್ಯ ಕಾರ್ಯದರ್ಶಿ ಹಾಗೂ
ಮುಖ್ಯಕಾರ್ಯನಿರ್ವಾಹಣಾಧಿಕಾರಿ.